**ಸಿವ್ಹಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿರವರ ನ್ಯಾಯಾಲಯ ಭಾಲ್ಕಿ**

**ಸಿ. ಸಿ. ಸಂಖ್ಯೆ: 1165/2020**

**ಚಾಸಾ-3**
**ಪ್ರಾಸಾ-2**

**ದಿನಾಂಕ: 25/10/2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

ಸಾಕ್ಷಿದಾರರ ಹೆಸರು : ತುಕರಾಮ

ತಂದೆ ಹೆಸರು : ದಶರಥ

ವಯಸ್ಸು : 45 ವರ್ಷ

ಉದ್ಯೋಗ : ಚಾಲಕ

ವಾಸಸ್ಥಳ : ಬೀರಿ-ಕೆ

**ಮುಖ್ಯ ವಿಚಾರಣೆ: ಸ. ಸ. ಅ. ರವರಿಂದ**

ಆರೋಪಿಯನ್ನು ನೋಡಿರುವುದಿಲ್ಲ. ಈ ಪ್ರಕರಣದ ಕುರಿತು ನನಗೆ ಯಾವುದೆ ಮಾಹಿತಿ ಇಲ್ಲ. ಸದರಿ ಪ್ರಕರಣದಲ್ಲಿ ಪೋಲಿಸರ ಕೋರಿಕೆ ಮೇರೆಗೆ ಒಂದು ದಾಖಲೆಗೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಪೋಲಿಸರು ಯಾವುದೆ ಪಂಚನಾಮೆ ಮಾಡಿಲ್ಲ.

ಸಾಕ್ಷಿ ಪಂಚನಾಮೆ ಮೇಲಿನ ತನ್ನ ಸಹಿ ನೋಡಿ ಗುರುತಿಸಿದ್ದು, ಪಂಚನಾಮೆಯನ್ನು ನಿಪಿ-2 ಎಂದು , ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಿ.ಪಿ-02 ರಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ. ನ್ಯಾಯಾಲಯದ ಮುಂದೆ ಇರುವ ಕಲ್ಲನ್ನು ನಾನು ಈ ಹಿಂದೆ ನೋಡಿರುವುದಿಲ್ಲ.

**(ಈ ಹಂತದಲ್ಲಿ ಸ. ಸ. ಅ. ರವರು ಪಾಟೀ ಸವಾಲಿಗೆ ವಿನಂತಿಸಿಕೊಂಡಿದ್ದು, ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನು**

**ಎಂದು ಪರಿಗಣಿಸಿ ಸ.ಸ.ಅ. ರವರಿಗೆ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು: ಸ.ಸ.ಅ.ರವರಿಂದ</u>**

ದಿನಾಂಕ: 24/10/2015 ರಂದು 01-30 ರಿಂದ 2-30 ಗ. ವರೆಗೆ ಚಾಸಾ-01 ರವರು ತೋರಿಸಿದ ಘಟನೆ ಸ್ಥಳದಲ್ಲಿ ಪೋಲಿಸರು ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಘಟನೆ ಸ್ಥಳದಲ್ಲಿ ಪಂಚನಾಮೆ ಮಾಡಿ ನ್ಯಾಯಾಲಯದ ಮುಂದೆ ಇರುವ ಕಲ್ಲನ್ನು ಜಪ್ತಿಪಡಿಸಿಕೊಂಡು, ಓದಿ ಹೇಳಿ ಪಂಚನಾಮೆಗೆ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಸಮಕ್ಷಮ ಪಂಚನಾಮೆ ಮಾಡಿದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ಶ್ರೀ.ಡಿ.ಎಸ್. ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.</u>**

**<u>ಮರು ವಿಚಾರಣೆ: ಇಲ್ಲ.</u>**

**( ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ)**

**ಓ. ಹೇ. ಕೇ. ಸರಿ ಇದೆ.**

**ಜೆ. ಎಮ್. ಎಫ್. ಸಿ, ಭಾಲ್ಕಿ**